**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಕೊಪ್ಪ**

**ಸಿ. ಸಿ. ನಂ.65/2023**

**ಪಿರ್ಯಾಧಿದಾರರುಃ** ಶ್ರೀ ಅಕ್ರಮ್ ಬಿನ್ ಅಬ್ದುಲ್ ರಹೀಂ, 38 ವರ್ಷ, ವಾಸ ಮಸೀದಿ ಎದುರು, ಜಯಪುರ, ಕೊಪ್ಪ ತಾಲ್ಲೂಕು.

**-ವಿರುದ್ಧ -**

**ಆರೋಪಿಃ** ಶ್ರೀ ಸುಂದರೇಶ್ ಬಿನ್ ಚಾಮಿ ಎಂ. ವಯಸ್ಕರು, ವಾಸ ಹಿರೇಗದ್ದೆ, ಹಿರೇಗದ್ದೆ ಅಂಚೆ, ಕೊಪ್ಪ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

**ಆರೋಪಣೆ**

ಆರೋಪಿಯಾದ ನೀವು ನಿಮ್ಮ ತುರ್ತು ಅವಶ್ಯಕತೆಗಾಗಿ ಪಿರ್ಯಾಧಿದಾರರಿಂದ ದಿನಾಂಕ 02.04.2022 ರಂದು ರೂ. 2,00,000/- ಗಳ ಕೈ ಸಾಲವನ್ನು ಪಡೆದುಕೊಂಡಿದ್ದು, ಸದರಿ ಸಾಲವನ್ನು ತೀರುವಳಿ ಮಾಡುವ ಸಲುವಾಗಿ ನೀವು ನಿಮ್ಮ ಬಾಬ್ತು ಅವರಿಗೆ ಚೆಕ್ ನಂ.909566 ದಿನಾಂಕ 31.10.2022 ನ್ನು ನಮೂದಿಸಿದ ಕಾವೇರಿ ಗ್ರಾಮೀಣ ಬ್ಯಾಂಕ್ (ಪ್ರಸ್ತುತ ಕರ್ನಾಟಕ ಗ್ರಾಮೀಣ ಬ್ಯಾಂಕ್), ಜಯಪುರ ಶಾಖೆಯ ಒಂದು ಚೆಕ್ಕನ್ನು ನೀಡಿದ್ದು, ಅವರು ಸದರಿ ಚೆಕ್ಕನ್ನು ಕೆನರಾ ಬ್ಯಾಂಕ್, ಯಲೆಮಡಲು ಶಾಖೆಗೆ ಹಾಜರುಪಸಿದಾಗ "Funds insufficient and Not arranged for/Exceeds arrangement" ಎಂಬ ಹಿಂಬರಹದೊಂದಿಗೆ ನೀವು ಕೊಟ್ಟಂತ ಚೆಕ್ ವಾಪಸ್ಸಾಗಿದ್ದು ಸದರಿ ಚೆಕ್ ಅಮಾನ್ಯಗೊಂಡ ಬಗ್ಗೆ ನಿಮ್ಮ ಗಮನಕ್ಕೆ ದಿನಾಂಕ 03.12.2022 ರಂತೆ ವಕೀಲರ ನೋಟೀಸು ನೀಡಿದ್ದು, ಸದರಿ ನೋಟೀಸು ನಿಮಗೆ ದಿನಾಂಕ 14.12.2022 ರಂದು ನಿಮಗೆ ಜಾರಿಯಾಗಿದ್ದೂ ಸಹ ನೀವು ಚೆಕ್ ಬಾಬ್ತು ಹಣವನ್ನು ನೀಡದೇ ವರ್ಗಾವಣೀಯ ಲಿಖಿತ ಅಧಿನಿಯಮ ಕಲಂ 138 ರ ಅಡಿಯಲ್ಲಿ ಅಪರಾಧವನ್ನು ನನ್ನ ಸಂಜ್ಞೆಯಲ್ಲಿ ಎಸಗಿರುತ್ತೀರಿ.

ಪ್ರಶ್ನೆ 1ಃ- ನಿಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?
ಉತ್ತರಃ ತಿಳಿಯಿತು

ಪ್ರಶ್ನೆ 2ಃ- ಮೇಲಿನ ಆಪಾಧನೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ ವಿಚಾರಣೆಯಾಗಬೇಕು.

ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಸ್ವತಃ ನಾನೇ ಬರೆದುಕೊಂಡಿರುವುದು ನಿಜವೆಂದು ದೃಢೀಕರಿಸುತ್ತೇನೆ.

ಸಹಿ/- 03.07.2025.
(ಎಂ.ಎನ್. ನಂದಿನಿ)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕೊಪ್ಪ